# 3 ಕೋಟಿ ರೇಷನ್ ಕಾರ್ಡ್ ರದ್ದು ಕೇಂದ್ರಕ್ಕೆ ಸುಪ್ರೀಂ ಕೋರ್ಟ್ ನೋಟಿಸ್




**ಹೊಸದಿಲ್ಲಿ:** ಆಧಾರ್ ಕಾರ್ಡ್ ಜತೆ ಜೋಡಣೆಯಾಗಿಲ್ಲ ಎಂಬ ಕಾರಣಕ್ಕೆ ಕೇಂದ್ರ ಸರಕಾರ ಮೂರು ಕೋಟಿ ಪಡಿತರ ಚೀಟಿಗಳನ್ನು ರದ್ದುಪಡಿಸಿರುವುದಕ್ಕೆ ಸುಪ್ರೀಂ ಕೋರ್ಟ್ ಕಳವಳ ವ್ಯಕ್ತಪಡಿಸಿದೆ. ಅಲ್ಲದೇ ಇದೇ ವಿಚಾರವಾಗಿ ಕೇಂದ್ರ ಮತ್ತು ರಾಜ್ಯ ಸರಕಾರಗಳಿಂದ ಪ್ರತಿಕ್ರಿಯೆ ಕೋರಿ ನೋಟಿಸ್ ಜಾರಿಗೊಳಿಸಿದೆ. ಕೊಯಿಲಿ ದೇವಿ ಎಂಬುವರು ಸಲ್ಲಿಸಿರುವ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಎಸ್.ಎ. ಬೊಬ್ಡೆ ನೇತೃತ್ವದ ತ್ರಿಸದಸ್ಯ ನ್ಯಾಯಪೀಠವು, ''ಆಧಾರ್ ಜೋಡಣೆ ಆಗಿಲ್ಲವೆಂಬ ಕಾರಣಕ್ಕೆ ದೊಡ್ಡ ಸಂಖ್ಯೆಯಲ್ಲಿ ರೇಷನ್ ಕಾರ್ಡ್‌ಗಳನ್ನು ರದ್ದುಗೊಳಿಸಿರುವುದರಿಂದ ಅನೇಕ ಸಮಸ್ಯೆಗಳು ಎದುರಾಗಿವೆ. ಇದೊಂದು ಗಂಭೀರ ವಿಷಯವಾಗಿದೆ. ಇಂತಹ ಮನವಿಗಳನ್ನು ಮೊದಲು ಸಂಬಂಧಿತ ಹೈಕೋರ್ಟ್ ಮುಂದೆ ಸಲ್ಲಿಸಬೇಕು,'' ಎಂದು ಹೇಳಿತು. ಕೇಂದ್ರದ ಪರ ಹಾಜರಿದ್ದ ಹೆಚ್ಚುವರಿ ಸಾಲಿಸಿಟರ್ ಜನರಲ್ ಅಮನ್ ಲೇಖಿ ಅವರು ಅರ್ಜಿದಾರರ ವಾದ ಸುಳ್ಳಿನಿಂದ ಕೂಡಿದೆ ಎಂದು ಹೇಳಿದಾಗ, ನ್ಯಾಯಪೀಠವು, ಇಲ್ಲಿ ಆಧಾರ್ ವಿಚಾರ ಪ್ರಮುಖವಾಗಿ ಬಂದಿರುವುದರಿಂದ ಕೇಂದ್ರಕ್ಕೆ ಹಾಗೂ ರಾಜ್ಯಗಳಿಗೆ ನೋಟಿಸ್ ನೀಡಲಾಗುತ್ತಿದ್ದೆ ಎಂದು ಹೇಳಿತು.